ಇ)

1. ಅವ್ಯವಹಾರಕ್ಕೆ ಸಂಬಂಧಿಸಿದ ನೌಕರರನ್ನು ಹಾಗೂ ಅಧಿಕಾರಿಗಳನ್ನು ಇಲಾಖಾ ವಿಚಾರಣೆ ಬಾಕಿ ಇಟ್ಟು ಅಮಾನತ್ತುಗೊಳಿಸಲಾಗಿದೆ.

   ಮಂಗಳೂರು ಪ್ರಕರಣಕ್ಕೆ ಸಂಬಂಧಿಸಿದ ನಾಲ್ಕು ಆಪಾದಿತರು, ತುಮಕೂರು ಮತ್ತು ಚಿಕ್ಕಬಳ್ಳಾಪುರದ ಪ್ರಕರಣಗಳಿಗೆ ಸಂಬಂಧಿಸಿದಂತೆ ತಲಾ ಒಬ್ಬರು ಆಪಾದಿತರುಗಳ ವಿರುದ್ಧ ಕ್ರಿಮಿನಲ್ ಮೊಕದ್ದಮೆ ಹೂಡಲಾಗಿದೆ.

   ಬೆಂಗಳೂರು (ಕೇಂದ್ರ) ಪ್ರಾದೇಶಿಕ ಸಾರಿಗೆ ಅಧಿಕಾರಿ ಕಛೇರಿ ಪ್ರಕರಣಕ್ಕೆ ಸಂಬಂಧಿಸಿದ ಆಪಾದಿತರ ವಿರುದ್ಧ ಲೋಕಾಯುಕ್ತ ವಿಚಾರಣೆ ಜರುಗಿಸಲಾಗುತ್ತಿದೆ.

2. ವಿಶೇಷ ಆಡಿಟ್ ನಡೆಸಲು ಕ್ರಮ ತೆಗೆದುಕೊಳ್ಳಲಾಗಿದೆ.

ಸಾರಿಗೆ ಸಂಸ್ಥೆಯಲ್ಲಿ ಕಂಪ್ಯೂಟರ್ ಖರೀದಿ ಮಾಡುವ ಬಗ್ಗೆ ಟೆಂಡರ್ ಕರೆಯುವುದು

1778 - ಶ್ರೀ ಯು.ಆರ್. ಸಭಾಪತಿ (ಉಡುಪಿ) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ರೂ. 15 ಲಕ್ಷ ಮೊತ್ತದ ಯಾವುದೇ ವಸ್ತುವನ್ನು ಖರೀದಿ ಮಾಡುವಾಗ ಓಪನ್ ಟೆಂಡರ್ ಕರೆಯುವ ಆದೇಶ ಇರುವುದು ನಿಜವೆ?

ಆ) ಹಾಗಿದ್ದಲ್ಲಿ ಕಂಪ್ಯೂಟರ್ ಖರೀದಿ ಮಾಡುವಾಗ ಟೆಂಡರ್ ಕರೆಯದೆ ಅವ್ಯವಹಾರ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಬಂದಿದ್ದಲ್ಲಿ, ಸರ್ಕಾರದವರು ಈ ಬಗ್ಗೆ ತೆಗೆದುಕೊಂಡ ಕ್ರಮಗಳೇನು? (ವಿವರ ನೀಡುವುದು)

ಶ್ರೀ ಬಿ.ಎನ್. ಬಚ್ಚೇಗೌಡ (ಸಾರಿಗೆ ಸಚಿವರು) :

ಅ) ಯಾವುದೇ ಮೊತ್ತದ ವಸ್ತುವನ್ನು ಖರೀದಿ ಮಾಡುವಾಗ ಟೆಂಡರ್ ಕರೆಯಲಾಗುತ್ತದೆ.

ಆ) ಇಲ್ಲ.

ಇ) ಉದ್ಭವಿಸುವುದಿಲ್ಲ.

ಬೆಂಗಳೂರು ದಕ್ಷಿಣ ತಾಲ್ಲೂಕಿನ ಹಳೇ ಬೈರೋಹಳ್ಳಿಯಲ್ಲಿ ಹನಿ ನೀರಾವರಿ ಸಬ್ಸಿಡಿ

1779 - ಶ್ರೀ ಯು.ಆರ್. ಸಭಾಪತಿ (ಉಡುಪಿ) : ಮಾನ್ಯ ಕೃಷಿ ಮತ್ತು ತೋಟಗಾರಿಕೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?